## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸಾದಿಲ್ವಾರು ವೆಚ್ಚದಿಂದ ವೇತನ ಪಡೆಯುತ್ತಿರುವ ಪೂರ್ಣಕಾಲಿಕ ನೌಕರರ ವೇತನ ಶ್ರೇಣಿಯ ಪರಿಷ್ಕರಣೆ

ಓದಲಾಗಿದೆ: ಸರ್ಕಾರಿ ಆದೇಶ ಸಂಖ್ಯೆ: ಆಇ 01 ಎಸ್‌ಆರ್‌ಪಿ 2008, ದಿ:16.01.2010

ಪ್ರಸ್ತಾವನೆ:

ಮೇಲೆ ಓದಲಾದ ದಿನಾಂಕ:16.01.2010 ರ ಸರ್ಕಾರಿ ಆದೇಶದಲ್ಲಿ ಸಾದಿಲ್ವಾರು ವೆಚ್ಚದಿಂದ ವೇತನ ಪಡೆಯುತ್ತಿರುವ ಎಲ್ಲಾ ಸರ್ಕಾರಿ ಇಲಾಖೆಗಳಲ್ಲಿನ ಪೂರ್ಣಕಾಲಿಕ ನೌಕರರ ವೇತನ ಶ್ರೇಣಿಯನ್ನು ರೂ.2500-3850 ರಿಂದ ರೂ.4800-7275 ಕ್ಕೆ ದಿನಾಂಕ: 16.01.2010 ರಿಂದ ಪರಿಷ್ಕರಿಸಲು ಮಂಜೂರಾತಿ ನೀಡಲಾಗಿತ್ತು. ದಿನಾಂಕ 1ನೇ ಏಪ್ರಿಲ್ 2012 ರಿಂದ ರಾಜ್ಯ ಸರ್ಕಾರಿ ನೌಕರರ ವೇತನ ಶ್ರೇಣಿಗಳನ್ನು ಕರ್ನಾಟಕ ನಾಗರಿಕ ಸೇವಾ (ಪರಿಷ್ಕೃತ ವೇತನ) ನಿಯಮಗಳು 2012 ರನ್ವಯ ಪರಿಷ್ಕರಿಸಿದ್ದರಿಂದಾಗಿ ಸಾದಿಲ್ವಾರು ವೆಚ್ಚದಿಂದ ವೇತನ ಪಡೆಯುತ್ತಿರುವ ಪೂರ್ಣಕಾಲಿಕ ನೌಕರರ ವೇತನ ಶ್ರೇಣಿಯನ್ನು ಪರಿಷ್ಕರಿಸುವ ಪ್ರಶ್ನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

### ಸರ್ಕಾರಿ ಆದೇಶ ಸಂಖ್ಯೆ: ಆಇ 02 ಎಸ್‌ಆರ್‌ಪಿ 2013, ಬೆಂಗಳೂರು, ದಿನಾಂಕ: 17ನೇ ಜನವರಿ 2013.

ಸಾದಿಲ್ವಾರು ವೆಚ್ಚದಿಂದ ವೇತನ ಪಡೆಯುತ್ತಿರುವ ಎಲ್ಲಾ ಸರ್ಕಾರಿ ಇಲಾಖೆಗಳಲ್ಲಿನ ಪೂರ್ಣಕಾಲಿಕ ನೌಕರರ 2007 ರ ವೇತನ ಶ್ರೇಣಿ ರೂ.4800-7275 ರನ್ನು ರೂ.9600-14550 ಕ್ಕೆ ದಿನಾಂಕ 1ನೇ ಏಪ್ರಿಲ್ 2012 ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಲು ಸರ್ಕಾರವು ಹರ್ಷಿಸುತ್ತದೆ.

ಕರ್ನಾಟಕ ನಾಗರಿಕ ಸೇವಾ (ಪರಿಷ್ಕೃತ ವೇತನ) ನಿಯಮಗಳು, 2012 ರಲ್ಲಿನ ಉಪಬಂಧಗಳ ಪ್ರಕಾರ ಅವರ ವೇತನವನ್ನು ಪರಿಷ್ಕೃತ ವೇತನ ಶ್ರೇಣಿಯಲ್ಲಿ ದಿನಾಂಕ 01 ನೇ ಏಪ್ರಿಲ್ 2012 ರಿಂದ ಜಾರಿಗೆ ಬರುವಂತೆ ನಿಗದಿಪಡಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

(ಕೆ.ಎಸ್.ರಾಜಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ(ಸೇವೆಗಳು-2)

ಸಂಕಲನಕಾರರು, ಕರ್ನಾಟಕ ಗೆಝೆಟ್ - ಗೆಝೆಟ್ ನ ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಮತ್ತು 100 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಒದಗಿಸುವುದು.

ಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ
2. ಇಲಾಖಾ ಮುಖ್ಯಸ್ಥರು/ವಿಭಾಗಾಧಿಕಾರಿಗಳು
3. ಮಹಾಲೇಖಪಾಲರು (ಲೆಕ್ಕಪತ್ರ:ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
4. ರಿಜಿಸ್ಟ್ರಾರ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು
5. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು

6. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಬೆಂಗಳೂರು
7. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು
8. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ಬೆಂಗಳೂರು
9. ಖಜಾನೆ ಅಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು
10. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್
11. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
12. ಕರ್ನಾಟಕ ಸರ್ಕಾರಿ ಸಚಿವಾಲಯದ ಗ್ರಂಥಾಲಯ, ವಿಧಾನ ಮಂಡಲ ಗ್ರಂಥಾಲಯ
13. ವಾರಪತ್ರ, ಶಾಖಾ ರಕ್ಷಾ ಕಡತ.

**Visit:WWW.finance.kar.nic.in**